**ಕರ್ನಾಟಕ ಸರ್ಕಾರ**

**ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಕೆ.ಆರ್.ವೃತ್ತ, ಬೆಂಗಳೂರು-01**

ಸಂಖ್ಯೆ: ಸಿ3(1)ಪ್ರಾ.ಶಿ/ಪ.ಪ್ರಾ.ಶಿ.ನೇ/ಸ್ಥ.ನಿ-14/2023-24 ದಿನಾಂಕ: 05.10.2024

:: **ಜ್ಞಾಪನ** ::

ವಿಷಯ:- 2022-23ನೇ ಸಾಲಿನಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಆಯ್ಕೆಯಾದ ಪದವೀಧರ ಪ್ರಾಥಮಿಕ ಶಿಕ್ಷಕರು (6 ರಿಂದ 8 ನೇ ತರಗತಿ) ಹುದ್ದೆಗೆ ಆಯ್ಕೆಯಾಗಿ ಕೌನ್ಸಿಲಿಂಗ್ ಪ್ರಕ್ರಿಯೆ ಮೂಲಕ ಸ್ಥಳ ಆಯ್ಕೆ ಮಾಡಿಕೊಂಡಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಕುರಿತು

ಉಲ್ಲೇಖ:-

1. ಸರ್ಕಾರದ ಪತ್ರ ಸಂಖ್ಯೆ:ಇಪಿ 89 ಪಿಬಿಎಸ್ 2021 ದಿನಾಂಕ: 03.02.2022.
2. ಪದವೀಧರ ಪ್ರಾಥಮಿಕ ಶಿಕ್ಷಕರು(6 ರಿಂದ 8 ನೇ ತರಗತಿ) ಹುದ್ದೆಗಳ ನೇಮಕಾತಿ (ಜಿಪಿಟಿ-2022) ಅಧಿಸೂಚನೆ ಸಂಖ್ಯೆ: ದಿನಾಂಕ:21.03.2022.
3. 1:1 ತಾತ್ಕಾಲಿಕ ಆಯ್ಕೆ ವಿವರ ಪ್ರಕಟಣೆ ದಿನಾಂಕ:18.11.2022.
4. ಮಾನ್ಯ ಉಚ್ಚ ನ್ಯಾಯಾಲಯ ಬೆಂಗಳೂರು ಇಲ್ಲಿ ದಾಖಲಾಗಿದ್ದ ರಿಟ್ ಅರ್ಜಿ ಸಂಖ್ಯೆ:23752/2022 ರ ತೀರ್ಪಿನ ದಿನಾಂಕ:03.01.2024
5. ಸರ್ಕಾರದ ಪತ್ರ ಸಂಖ್ಯೆ:ಇಪಿ 79 ಪಿಬಿಎಸ್ 2023 ದಿನಾಂಕ:23.02.2023.
6. ಜಿಪಿಟಿ-2022 ಪರಿಷ್ಕೃತ 1:1 ಮುಖ್ಯ ಆಯ್ಕೆವಿವರ ಪ್ರಕಟಣೆಯ ದಿ:08.03.2023.
7. ಮಾನ್ಯ ಉಚ್ಚ ನ್ಯಾಯಾಲಯ ಬೆಂಗಳೂರು ಇಲ್ಲಿ ದಾಖಲಾಗಿದ್ದ ರಿಟ್ ಅರ್ಜಿ ಸಂಖ್ಯೆ ರಿಟ್ ಅಪೀಲು ಸಂಖ್ಯೆ. 305/2023 ತೀರ್ಪಿನ ದಿನಾಂಕ:12.10.2023.
8. ಸರ್ಕಾರದ ಪತ್ರ ಸಂಖ್ಯೆ: ಇಡಿ 230 ಪಿಎಂಡಬ್ಲ್ಯೂ2023 ದಿನಾಂಕ:16.10.2023.
9. ಯೋಜನಾ ನಿರಾಶ್ರಿತ ನೇಮಕಾತಿಗೆ ಸಂಬಂಧಿಸಿದಂತೆ ಮಾನ್ಯ ಉಚ್ಚನ್ಯಾಯಾಲಯದಲ್ಲಿ ದಾಖಲಾಗಿದ್ದ ರಿಟ್ ಅರ್ಜಿ ಸಂಖ್ಯೆ: ರಿಟ್ ಪಿಟೆಷನ್ ಸಂಖ್ಯೆ:1190/2023 ರ ತೀರ್ಪು.
10. ಈ ಕಛೇರಿಯ ಸಮ ಸಂಖ್ಯೆ ಜ್ಞಾಪನ ದಿನಾಂಕ 02/11/2023
11. 371ಜೆ ಹುದ್ದೆಗಳಿಗೆ ಸಂಬಂಧ ಪಟ್ಟಂತೆ ಮಾನ್ಯ ಉಚ್ಚ ನ್ಯಾಯಾಲಯದಲ್ಲಿನ ರಿಟ್ ಅರ್ಜಿ 23450/2023 ಹಾಗೂ 23162/2023ರಲ್ಲಿ ದಿನಾಂಕ 24/11/2023ರಂದು ನೀಡಿರುವ ಮಧ್ಯಂತರ ಆದೇಶ.
12. ಮಾನ್ಯ ಭಾರತ ಸರ್ವೋಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ವಿಶೇಷ ಅನುಮತಿ ಅರ್ಜಿ ಸಂಖ್ಯೆ 27984-27988/2023 ಪ್ರಕರಣದಲ್ಲಿನ ಮಧ್ಯಂತರ ಆದೇಶ ದಿನಾಂಕ 03.01.2024 & 22.01.2024
13. ಈ ಕಛೇರಿ ಜ್ಞಾಪನಾ ಸಂಖ್ಯೆ ಸಂಖ್ಯೆ:ಸಿಎಸಿ–3/ಜಿಪಿಟಿಆರ್–2022/ಎಸ್ಎಲ್‌ಪಿ–2023/ಸಿಸಿನಂ:40/20234–24 ದಿನಾಂಕ: 03.02.2024
14. ಮಾನ್ಯ ಭಾರತ ಸರ್ವೋಚ್ಚ ನ್ಯಾಯಾಲಯದ RECORD OF PROCEEDINGS ಆದೇಶ ದಿನಾಂಕ 04.10.2024

* * * *

ವಿಷಯದನ್ವಯ, 2022-23 ನೇ ಸಾಲಿನಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿನ ಖಾಲಿ ಹುದ್ದೆಗಳಿಗೆ ಆಯ್ಕೆಯಾದ ಅರ್ಹ ಪದವೀಧರ ಪ್ರಾಥಮಿಕ ಶಿಕ್ಷಕರು ( 6 ರಿಂದ 8 ನೇ ತರಗತಿ) ಹುದ್ದೆಗೆ ಕೌನ್ಸಿಲಿಂಗ್ ಮೂಲಕ ಸ್ಥಳ ಹಂಚಿಕೆ ಪ್ರಕ್ರಿಯೆ ಕೈಗೊಳ್ಳಲಾಗಿತ್ತು.

ಉಲ್ಲೇಖ 14 ರಂತೆ ಭಾರತ ಸರ್ವೋಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ವಿಶೇಷ ಅನುಮತಿ ಅರ್ಜಿ ಸಂಖ್ಯೆ 27984-388/2023 ಪ್ರಕರಣದಲ್ಲಿನ ಮಧ್ಯಂತರ ಆದೇಶ ದಿನಾಂಕ 03.01.2024 & 22.01.2024 ಪ್ರಕಾರ ಈಗಾಗಲೇ ನೇಮಕಾತಿ ಆದೇಶ ಪಡೆದು ನೇಮಕಗೊಂಡಿರುವ 11494 ಅಭ್ಯರ್ಥಿಗಳಿಗೆ ತಮ್ಮ ನೇಮಕಾತಿಯು ಸದರಿ ವಿಶೇಷ ಅನುಮತಿ ಅರ್ಜಿಯಲ್ಲಿ ಅಂತಿಮ ತೀರ್ಪಿಗೆ ಒಳಪಟ್ಟಿರುವ ವಿಷಯವನ್ನು ನೇಮಕಾತಿ

ಪ್ರಾಧಿಕಾರಿಗಳಾದ ಜಿಲ್ಲಾ ಉಪನಿರ್ದೇಶಕರ ಪ್ರತಿ ಅಭ್ಯರ್ಥಿಗೆ ಲಿಖಿತವಾಗಿ ತಿಳಿಸಿ ಸ್ವೀಕೃತಿ ಪಡೆದಿರುವುದನ್ನು ಪುನರ್ ಉಚ್ಚರಿಸಲಾಗಿತ್ತು.
ಮುಂದುವರೆದು, ಭಾರತ ಸರ್ವೋಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ವಿಶೇಷ ಅನುಮತಿ ಅರ್ಜಿ ಸಂಖ್ಯೆ 27984-388/2023 ಪ್ರಕರಣದಲ್ಲಿನ ಮಧ್ಯಂತರ ಆದೇಶ ದಿನಾಂಕ 03.01.2024 ಆದೇಶಾನುಸಾರ ಈ ಹಿಂದೆ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಭಾಗವಹಿಸಿ ಸ್ಥಳ ಆಯ್ಕೆ ಮಾಡಿಕೊಂಡಿದ್ದ ಅಭ್ಯರ್ಥಿಗಳಿಗೆ ವಿವಿಧ ಕಾರಣಗಳಿಗಾಗಿ ಅಂದರೆ ಸಕ್ಷಮ ಪ್ರಾಧಿಕಾರದಿಂದ ಅಂಕಪಟ್ಟಿ, ನೈಜತೆ ಪ್ರಮಾಣ ಪತ್ರ, ಪೋಲಿಸ್ ದೃಢೀಕರಣ, ಕನ್ನಡ ಮಾಧ್ಯಮ/ ಗ್ರಾಮೀಣ ವ್ಯಾಸಂಗ ಪ್ರಮಾಣ ಪತ್ರ ಜಾತಿ ಮತ್ತು ಆದಾಯ ಸಿಂಧುತ್ವ ಪ್ರಮಾಣ ಸ್ವೀಕೃತವಾಗದ ಮತ್ತು ನೇಮಕಾತಿ ಆದೇಶಗಳನ್ನು ತಾತ್ಕಾಲಿಕವಾಗಿ ತಡಹಿಡಿಯಲಾಗಿತ್ತು.

ಉಲ್ಲೇಖ 14 ಮಾನ್ಯ ಭಾರತ ಸರ್ವೋಚ್ಚ ನ್ಯಾಯಾಲಯದ RECORD OF PROCEEDINGS ದಿ: 04.10.2024ರ ಆದೇಶಾನುಸಾರ ನೇಮಕಾತಿ ಆದೇಶ ನೀಡಲು ಬಾಕಿ ಉಳಿದಿರುವ ಅಭ್ಯರ್ಥಿಗಳಿಗೆ ನೇಮಕಾತಿ ನೀಡಲು ಅನುಮತಿಸಿದೆ. ಪ್ರಯುಕ್ತ, ಈ ಹಿಂದೆ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಭಾಗವಹಿಸಿ ಸ್ಥಳ ಆಯ್ಕೆ ಮಾಡಿಕೊಂಡಿದ್ದು, ನೇಮಕಾತಿ ಆದೇಶಗಳನ್ನು ನೀಡದಿರುವ ಅಭ್ಯರ್ಥಿಗಳಿಗೆ ಸಕ್ಷಮ ಪ್ರಾಧಿಕಾರದಿಂದ ಅಂಕಪಟ್ಟಿ, ನೈಜತೆ ಪ್ರಮಾಣ ಪತ್ರ, ಪೋಲಿಸ್ ದೃಢೀಕರಣ, ಕನ್ನಡ ಮಾಧ್ಯಮ/ ಗ್ರಾಮೀಣ ವ್ಯಾಸಂಗ ಪ್ರಮಾಣ ಪತ್ರ ಜಾತಿ ಮತ್ತು ಆದಾಯ ಸಿಂಧುತ್ವ ಪ್ರಮಾಣ ಪತ್ರ ನೇಮಕಾತಿ ಪ್ರಾಧಿಕಾರಕ್ಕೆ ಪೂರ್ಣ ಪ್ರಮಾಣದಲ್ಲಿ ಸ್ವೀಕೃತವಾಗಿರುವುದನ್ನು ನಿಯಮಾನುಸಾರ ಖಾತ್ರಿಪಡಿಸಿಕೊಂಡು **ಅಭ್ಯರ್ಥಿಯು ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಈಗಾಗಲೇ ಸ್ಥಳ ಆಯ್ಕೆ ಮಾಡಿಕೊಂಡಿರುವ ಅಭ್ಯರ್ಥಿಗಳಿಗೆ ಮಾತ್ರ** ಶಾಲಾ ಕರ್ತವ್ಯಕ್ಕೆ ಹಾಜರಾಗಲು ವಿಳಂಬಕ್ಕೆ ಅವಕಾಶ ನೀಡದಂತೆ ನಿಯಮಾನುಸಾರ ಉಲ್ಲೇಖ (13) ರಲ್ಲಿನಂತೆ ಷರತ್ತು ಬದ್ಧವಾಗಿ ನೇಮಕಾತಿ ಆದೇಶ ನೀಡಲು ಸೂಚಿಸಿದೆ.

(ಬಿ.ಬಿ.ಕಾವೇರಿ,)
ಆಯುಕ್ತರು
ಶಾಲಾ ಶಿಕ್ಷಣ ಇಲಾಖೆ

ಗೆ,
**ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ಅಗತ್ಯ ಅನುಪಾಲನೆಗಾಗಿ**

ಪ್ರತಿಯನ್ನು :
1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು ಇವರಿಗೆ ಗೌರವ ಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
2. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ ಇವರಿಗೆ ಮಾಹಿತಿಗಾಗಿ.
3. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ ಇವರಿಗೆ ಮಾಹಿತಿಗಾಗಿ
4. ನಿರ್ದೇಶಕರು(ಪ್ರಾಥಮಿಕ ಶಿಕ್ಷಣ) ಶಾಲಾ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ಬೆಂಗಳೂರು ರವರಿಗೆ ಮಾಹಿತಿಗಾಗಿ.
5. ಆಯಾ ವಿಭಾಗೀಯ ಸಹ ನಿರ್ದೇಶಕರು ರವರಿಗೆ ಮಾಹಿತಿಗಾಗಿ.
6. ಕಛೇರಿ ಪ್ರತಿ.